ವಿಷಯ : ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆಗಳು

1334 (1911)-ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು? ಇದರಲ್ಲಿ ಎಷ್ಟು ವೈದ್ಯರುಗಳ ಹುದ್ದೆ ಖಾಲಿ ಇವೆ?

ಆ) ವೈದ್ಯರುಗಳ ಹುದ್ದೆ ಖಾಲಿ ಇದ್ದಲ್ಲಿ ಸಾರ್ವಜನಿಕರಿಗೆ ಪ್ರಯೋಜನವಾಗುವುದೇ? ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು? ವಿವರ ನೀಡುವುದು.

ಡಾ. ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 1509 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ. ಇವುಗಳಲ್ಲಿ ಒಟ್ಟು 328 ವೈದ್ಯರುಗಳ ಹುದ್ದೆಗಳು ಖಾಲಿ ಇರುತ್ತವೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಹುದ್ದೆ ಖಾಲಿ ಇರುವ ಜಾಗದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಪ್ರಭಾವ ವೈದ್ಯರುಗಳನ್ನು ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಪಡೆದು ನೋಡಿಕೊಳ್ಳುವಂತೆ ಸೂಚನೆ ಹಾಗೂ ರಾಜ್ಯದಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆಯನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ 400 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ನೇಮಕಾತಿ ಆದೇಶವನ್ನು ನೀಡುವ ಸಮಯದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು

ವಿಷಯ: ಮಾಗಡಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ತೊಂದರೆ.

1337 (1916)-ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯಗ್ರಾಮೀಣಾಭಿವೃದ್ಧಿ ಪಂಚಾಯತರಾಜ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಾಗಡಿ ತಾಲ್ಲೂಕಿನಲ್ಲಿ ಜನ ಕುಡಿಯುವ ನೀರಿನ ತೊಂದರೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮುಂಬರುವ ಬೇಸಿಗೆಯಲ್ಲಿ ನೀರಿನ ಕೊರತೆಯನ್ನು ಎದುರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)